ದಿಃ 20.04.2023 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

ಪಾಟಿ ಸವಾಲುಃ 1 ಮತ್ತು 2 ನೇ ಎದುರುದಾರರ ಪರ ವಕೀಲರಿಂದಃ

2 ನೇ ಎದುರುದಾರರು ತಮ್ಮ ದ್ವಿಚಕ್ರ ವಾಹನವನ್ನು ಅತಿವೇಗವಾಗಿ ಮತ್ತು ಅಜಾಗರೂಕತೆಯಿಂದ ಓಡಿಸಿಕೊಂಡು ಹೋಗುತ್ತಿರಲಿಲ್ಲ ಎಂದರೆ ಸುಳ್ಳು. ನಾನು ಬಿಪಿಎಲ್ ಕಾರ್ಡ್ ಹೊಂದಿರುತ್ತೇನೆ. ಬಿಪಿಎಲ್ ಕಾರ್ಡ್ ಹೊಂದಿದವರಿಗೆ ಸರ್ಕಾರದಿಂದ ಉಚಿತವಾಗಿ ಚಿಕಿತ್ಸೆ ಸಿಗುತ್ತದೆ ಎಂದರೆ ಸುಳ್ಳು. ನಾನು ನಗರ ಸಭೆಯಲ್ಲಿ ಸ್ವೀಪರ್ ಆಗಿ ಕೆಲಸ ಮಾಡುತ್ತಿರುವುದನ್ನು ತೋರಿಸಲು ನ್ಯಾಯಾಲಯಕ್ಕೆ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ. 2 ನೇ ಎದುರುದಾರರ ಯಾವುದೇ ತಪ್ಪಿನಿಂದ ಅಪಘಾತ ಆಗಿರುವುದಿಲ್ಲ ಎಂದರೆ ಸುಳ್ಳು. ನಾನು ಕಸ ಗುಡಿಸಿಕೊಂಡು ಹೋಗುವಾಗ 2 ನೇ ಎದುರುದಾರ ದ್ವಿಚಕ್ರ ವಾಹನದ ಕಡೆ ಹೋಗಿದ್ದರಿಂದ ಅಪಘಾತವಾಗಿರುತ್ತದೆ ಎಂದರೆ ಸುಳ್ಳು. ನಾನು ನ್ಯಾಯಾಲಯಕ್ಕೆ ಸಲ್ಲಿಸಿರುವಂತಹ ಮೆಡಿಕಲ್ ಬಿಲ್‌ಗಳು ಈ ಕೇಸಿನ

ಸಲುವಾಗಿ ಸೃಷ್ಟಿಸಿರುವಂತಹ ಬಿಲ್‌ಗಳು ಆಗಿರುತ್ತವೆ ಎಂದರೆ ಸರಿಯಲ್ಲ. 1 ಮತ್ತು 2ನೇ ಎದುರುದಾರರು ನನಗೆ ಪರಿಹಾರ ನೀಡಲು ಬಾಧ್ಯಸ್ಥರಾಗಿರುವುದಿಲ್ಲ ಎಂದರೆ ಸುಳ್ಳು. ನಿಪಿ 18 ದಾಖಲೆ ಈ ಕೇಸಿನ ಸಲುವಾಗಿ ಸೃಷ್ಟಿಸಿರುವಂತಹ ದಾಖಲೆ ಆಗಿರುತ್ತದೆ ಎಂದರೆ ಸುಳ್ಳು.

ಪಾಟಿ ಸವಾಲುಃ 3ನೇ ಎದುರುದಾರರ ಪರ ವಕೀಲರಿಂದಃ

ಅಪಘಾತ ಪಡಿಸಿದಂತಹ ದ್ವಿಚಕ್ರ ವಾಹನಕ್ಕೆ ಯಾವುದೇ ವಿಮೆ ಇಲ್ಲದೇ ಇದ್ದುದರಿಂದ 3ನೇ ಎದುರುದಾರರು ಪರಿಹಾರ ನೀಡಲು ಬಾಧ್ಯಸ್ಥರಾಗಿರುವುದಿಲ್ಲ ಎಂದರೆ ಸುಳ್ಳು.

**ಮರುವಿಚಾರಣೆಃ** ಇರುವುದಿಲ್ಲ

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

ಓ.ಹೇ.ಕೇ.ಸರಿ.ಇದೆ.

ಸಹಿ/-
(ಶ್ರೀಮತಿ ಎನ್ ಬಿ ಜಯಲಕ್ಷ್ಮಿ)
ಹಿರಿಯ ಸಿವಿಲ್ ನ್ಯಾಯಾಧೀಶರು,
ಕೊಡಗು, ಮಡಿಕೇರಿ.